# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 33 (358) |
| ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 29-01-2026 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸುಮಾರು 4 ಲಕ್ಷಕ್ಕಿಂತ ಹೆಚ್ಚು ಜನಸಂಖ್ಯೆಯನ್ನು ಹೊಂದಿರುವ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕು ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ ಹಾಗೂ ಆರ್ಥಿಕವಾಗಿ ಮುಂದುವರೆಯುತ್ತಿದ್ದು, ರಾಯಚೂರು ಜಿಲ್ಲಾ ಕೇಂದ್ರದಿಂದ ಸುಮಾರು 90-95 ಕಿ.ಮೀ., ದೂರದಲ್ಲಿರುವುದರಿಂದ ಜನರು ತಮ್ಮ ದೈನಂದಿನ ಆಡಳಿತಾತ್ಮಕ ಕೆಲಸಗಳಿಗೆ ಜಿಲ್ಲಾ ಕೇಂದ್ರಕ್ಕೆ ಅಲೆದಾಡುವುದು ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಮಾನ್ವಿ, ಮಸ್ಕಿ, ಸಿರವಾರ, ಸಿರಗುಪ್ಪ, ಲಿಂಗಸಗೂರು ಹಾಗೂ ಕನಕಗಿರಿ ತಾಲೂಕು ಕೇಂದ್ರಗಳು ಅವುಗಳ ಜಿಲ್ಲಾ ಕೇಂದ್ರಗಳಿಗಿಂತ ಸಿಂಧನೂರು ತಾಲೂಕು ಕೇಂದ್ರಕ್ಕೆ ಹತ್ತಿರದಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ; | ಹೌದು. |
| ಇ) | ಸಿಂಧನೂರು, ಮಸ್ಕಿ, ತುರವಿಹಾಳ (ನೂತನ ಪ್ರಸ್ತಾಪಿತ ತಾಲ್ಲೂಕು), ಸಿರಗುಪ್ಪ, ಕನಕಗಿರಿ ತಾಲ್ಲೂಕುಗಳನ್ನು ಒಳಗೊಂಡಂತೆ ಅಥವಾ ಸಿಂಧನೂರು, ಮಸ್ಕಿ, ಲಿಂಗಸಗೂರು ಹಾಗೂ ಸಿರವಾರ ತಾಲ್ಲೂಕುಗಳನ್ನು ಒಳಗೊಂಡಂತೆ ಸಿಂಧನೂರು ತಾಲ್ಲೂಕು ಕೇಂದ್ರವನ್ನು ಜಿಲ್ಲಾ ಕೇಂದ್ರವನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕನ್ನು ನೂತನ ಜಿಲ್ಲಾ ಕೇಂದ್ರವನ್ನಾಗಿ ಸೃಜಿಸುವ ಸಂಬಂಧದ ಕೋರಿಕೆಗಳು ಸ್ವೀಕೃತವಾಗಿರುತ್ತವೆ. ಸದರಿ ಕೋರಿಕೆಗಳ ನ್ನು ಪರಿಗಣಿಸಲು ಸೂಕ್ತವಾಗಿದ್ದಲ್ಲಿ, ಸರ್ಕಾರಕ್ಕೆ ವಿವರವಾದ ಪ್ರಸ್ತಾವನೆ ಸಲ್ಲಿಸುವಂತೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ಇವರಿಗೆ ಪತ್ರ |

| | | |
|---|---|---|
| | | ಬರೆಯಲಾಗಿದ್ದು, ಸದರಿಯವರಿಂದ ಯಾವುದೇ ವರದಿ/ ಪ್ರಸ್ತಾವನೆ ಸ್ವೀಕೃತಗೊಂಡಿರುವುದಿಲ್ಲ.<br><br>ಅಲ್ಲದೇ, 2026ನೇ ಸಾಲಿನಲ್ಲಿ ಜನಗಣತಿ ನಡೆಸಲು ಕೇಂದ್ರ ಸರ್ಕಾರವು ಉದ್ದೇಶಿಸಿದ್ದು, ದಿನಾಂಕ: 01-01-2026 ರಿಂದ 31-03-2027ರ ವರೆಗೆ ಆಡಳಿತಾತ್ಮಕ ಗಡಿಗಳನ್ನು ಬದಲಾವಣೆ ಮಾಡದಂತೆ ಕೇಂದ್ರ ಸರ್ಕಾರವು ರಾಜ್ಯಕ್ಕೆ ಸೂಚನೆ ನೀಡಿರುತ್ತದೆ. ಆದ್ದರಿಂದ, ಸರ್ಕಾರವು ಪ್ರಸ್ತುತದಲ್ಲಿ ಹೊಸ ಜಿಲ್ಲೆಗಳ ರಚನೆಗೆ ಯಾವುದೇ ತಾತ್ವಿಕ ನಿರ್ಣಯ ಕೈಗೊಂಡಿರುವುದಿಲ್ಲ. |
| ಈ) | ಇದ್ದಲ್ಲಿ, ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಲಾಗುತ್ತದೆ? | ಉದ್ಭವಿಸುವುದಿಲ್ಲ. |

**ಸಂಖ್ಯೆ: ಕಂಇ 1 ಎಲ್‌ಆರ್‌ಡಿ 2026**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು